ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಬುಧವಾರ, ದಿನಾಂಕ: 17ನೇ ಜುಲೈ, 2019

ಸರ್ಕಾರಿ ಐ.ಟಿ.ಐ. ಕಾಲೇಜುಗಳ ಸಂಖ್ಯೆ, ಮೂಲಭೂತ ಸೌಕರ್ಯಗಳ ಕುರಿತು

ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):-

206 (321) ಮಾನ್ಯ ಮುಜರಾಯಿ ಹಾಗೂ ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪ್ರಾರಂಭಿಸಲಾದ ಸರ್ಕಾರಿ ಐ.ಟಿ.ಐ. ಕಾಲೇಜುಗಳ ಸಂಖ್ಯೆ ಎಷ್ಟು ; ಅದರಲ್ಲಿ ಸರ್ಕಾರಿ ಕಟ್ಟಡಗಳನ್ನು ಹೊಂದಿರುವ ಐ.ಟಿ.ಐ. ಕಾಲೇಜುಗಳ ಸಂಖ್ಯೆ ಎಷ್ಟು ; ಸ್ವಂತ ಕಟ್ಟಡವಿಲ್ಲದೆ ನಡೆಯುತ್ತಿರುವ ಕಾಲೇಜುಗಳ ಸಂಖ್ಯೆ ಎಷ್ಟು; ಒದಗಿಸಲಾದ ಮೂಲಭೂತ ಸೌಕರ್ಯಗಳ ಪಟ್ಟಿ ನೀಡುವುದು;

(ಆ) ಪ್ರಸ್ತುತ ಹೊಸದಾಗಿ ಎಷ್ಟು ಸರ್ಕಾರಿ ಐ.ಟಿ.ಐ. ಕಾಲೇಜುಗಳನ್ನು ಪ್ರಾರಂಭಿಸಲು ನಿರ್ಧರಿಸಲಾಗಿದೆ; ಇವುಗಳನ್ನು ಸ್ವಂತ ಕಟ್ಟಡದಲ್ಲಿ ಪ್ರಾರಂಭಿಸಲು ಇಚ್ಛಿಸಲಾಗಿದೆಯೇ;

(ಇ) ವಿಜಯಪುರ, ಬಾಗಲಕೋಟೆ, ಬೆಳಗಾವಿ ಜಿಲ್ಲೆಗಳಲ್ಲಿ ಇರುವ ಸರ್ಕಾರಿ ಐ.ಟಿ.ಐ. ಕಾಲೇಜುಗಳ ವಿಭಾಗವಾರು ವಿದ್ಯಾರ್ಥಿಗಳ ಸಂಖ್ಯೆ, ಬೋಧಕ/ತರಬೇತಿದಾರರು ಸಂಖ್ಯೆ, ಖಾಲಿ ಹುದ್ದೆಗಳ ಸಂಖ್ಯೆ, ತಾತ್ಕಾಲಿಕ ಸಿಬ್ಬಂದಿಗಳ ಸಂಖ್ಯೆ, ಅಲ್ಲಿರುವ ಮೂಲಭೂತ ಸೌಕರ್ಯಗಳು ಹಾಗೂ ಅಗತ್ಯ ಮೂಲಭೂತ ಸೌಕರ್ಯಗಳ ಕೋರಿಕೆಯ ಮಾಹಿತಿಗಳ ಸಂಪೂರ್ಣ ವಿವರ ನೀಡುವುದು?